(2)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗುಲ್ಬರ್ಗಾ ಕಂದಾಯ ವಿಭಾಗದ 5 ಜಿಲ್ಲೆಗಳಲ್ಲಿ ಸುವರ್ಣ ಗ್ರಾಮೋದಯ ಯೋಜನೆಯ 4ನೇ ಹಂತವನ್ನು 2010-2011ನೇ ಸಾಲಿನಲ್ಲಿ ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: ಸಂಖ್ಯೆ:ಗ್ರಾಅಪ:150:ಆರ್‌ಆರ್‌ಸಿ:2006 ದಿನಾಂಕ.07.10.2006.

**ಪ್ರಸ್ತಾವನೆ:**

ಕರ್ನಾಟಕವು ಏಕೀಕರಣಗೊಂಡು ಒಂದನೇ ನವೆಂಬರ್ 2006ಕ್ಕೆ 50 ವರ್ಷಗಳಾಗಿದ್ದು, ಆ ವರ್ಷವನ್ನು "ಸುವರ್ಣ ಕರ್ನಾಟಕ" ವರ್ಷವೆಂದು ಅರ್ಥಪೂರ್ಣವಾಗಿ ಆಚರಿಲು ಉದ್ದೇಶಿಸಿ ಸುವರ್ಣ ಗ್ರಾಮೋದಯ ಎಂಬ ವಿನೂತನ ಗ್ರಾಮೀಣ ಅಭಿವೃದ್ಧಿ ಯೋಜನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಯೋಜನೆಯಡಿ ಪ್ರತಿ ವರ್ಷ 1000 ಗ್ರಾಮಗಳನ್ನು ಆಯ್ಕೆ ಮಾಡಿ ಆಯ್ದ ಗ್ರಾಮಗಳನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸುವುದಾಗಿದೆ. ಮೊದಲನೇ ಹಂತದಲ್ಲಿ 1204 ಗ್ರಾಮಗಳನ್ನು ಆಯ್ಕೆ ಮಾಡಿ, ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. 2 ಮತ್ತು 3ನೇ ಹಂತದ ಯೋಜನೆಯ ಗ್ರಾಮಗಳ ಆಯ್ಕೆ ಪ್ರಕ್ರಿಯೆ ಮುಗಿದಿದ್ದು, ಗ್ರಾಮಾಭಿವೃದ್ಧಿ ಯೋಜನೆಯ ತಯಾರಿಕೆ ಪ್ರಗತಿಯಲ್ಲಿರುತ್ತವೆ. ಪ್ರಸ್ತುತ ಡಾ.ಡಿ.ಎಂ.ನಂಜುಂಡಪ್ಪನವರ ಪ್ರಾದೇಶಿಕ ಅಸಮತೋಲನ ನಿವಾರಣ ಉನ್ನತಾಧಿಕಾರದ ಸಮಿತಿಯ ವರದಿ ಆಧಾರಿತ ಗುಲ್ಬರ್ಗಾ ವಿಭಾಗವು ಅತಿ ಹೆಚ್ಚಿನ ಹಿಂದುಳಿದ ತಾಲ್ಲೂಕುಗಳನ್ನು ಹೊಂದಿರುವುದರಿಂದ, ಸದರಿ ವಿಭಾಗದಲ್ಲಿ ಅಂದಾಜು ರೂ 208.20 ಕೋಟಿಗಳ ವೆಚ್ಚದಲ್ಲಿ ಸುಮಾರು 200 ಗ್ರಾಮಗಳನ್ನು ಆಯ್ಕೆ ಮಾಡಿ ಸುವರ್ಣ ಗ್ರಾಮೋದಯ ಯೋಜನೆಯ 4ನೇ ಹಂತದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಗ್ರಾಮಗಳ ಆಯ್ಕೆ ವಿಧಾನ, ತಾಲ್ಲೂಕು ಅನುದಾನ ಹಂಚಿಕೆ ಮತ್ತು ವಿವಿಧ ಕಾಮಗಾರಿಗಳ ಅನುಷ್ಠಾನ ಮಾರ್ಗಸೂಚಿಯನ್ನು ಮೂಲ ಯೋಜನೆಯಲ್ಲಿದ್ದಂತೆ ಅನುಸರಿಸಲಾಗುವುದು. ಗ್ರಾಮಾಂತರ ಪ್ರದೇಶದ ಜನಸಂಖ್ಯೆ ಮತ್ತು ತಾಲ್ಲೂಕಿಗೆ ನಿಗದಿಯಾದ ಅನುದಾನದಲ್ಲಿ ತಲಾನುದಾನ ಹಂಚಿಕೆಯನ್ನು ನಿಗದಿಪಡಿಸಿ ಆಯಾ ಗ್ರಾಮದ 2001ರ ಜನಗಣತಿಯ ಜನಸಂಖ್ಯೆಯಂತೆ ಗ್ರಾಮಗಳ ಅನುದಾನ ಹಂಚಿಕೆಯಾಗುತ್ತದೆ. ಸುವರ್ಣ ಗ್ರಾಮೋದಯ ಯೋಜನೆಯ ಉದ್ದೇಶ, ಮಾರ್ಗಸೂಚಿ ಮತ್ತು ಕಾರ್ಯಾನುಷ್ಠಾನ ವಿಧಿಗಳು ಮೂಲ ಕೈಪಿಡಿಯಲ್ಲಿ ತಿಳಿಸಿದಂತೆ ಇರುತ್ತವೆ. .........,...........

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:55:ಸುಗ್ರಾಯೋ2009,ಬೆಂಗಳೂರು, ದಿನಾಂಕ:15.09.2009**

ಮೇಲಿನ ಪ್ರಸ್ತಾವನೆಗಳ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಗುಲ್ಬರ್ಗಾ ಕಂದಾಯ ವಿಭಾಗದ 5 ಜಿಲ್ಲೆಗಳ 31 ತಾಲ್ಲೂಕುಗಳಲ್ಲಿನ ಸುಮಾರು 200 ಗ್ರಾಮಗಳನ್ನು ಸುವರ್ಣ ಗ್ರಾಮೋದಯ ಯೋಜನೆಯ 4ನೇ ಹಂತದಡಿ ಆಯ್ಕೆ ಮಾಡಿ, ರೂ.208.20 ಕೋಟಿ ವೆಚ್ಚದಲ್ಲಿ 2010-2011ನೇ ಸಾಲಿನಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಮಂಜೂರಾತಿ ನೀಡಿದೆ. ಈ ಯೋಜನೆಗೆ ತಗಲುವ ಅನುದಾನ ಮತ್ತು ಮಾರ್ಗಸೂಚಿಗಳನ್ನು ಉಲ್ಲೇಖಿತ ಆದೇಶದ ಅನುಬಂಧ, ತತ್ಸಂಬಂಧವಾಗಿ ಹೊರಡಿಸಲಾದ ಕೈಪಿಡಿಯಲ್ಲಿನ ಮತ್ತು ಕಾಲಕಾಲಕ್ಕೆ ಹೊರಡಿಸಲಾದ ಸುತ್ತೋಲೆಗಳನ್ವಯ ಅನುಷ್ಠಾನಗೊಳಿಸುವುದು.

ತತ್ಸಂಬಂಧವಾದ ವೆಚ್ಚವನ್ನು ಲೆಕ್ಕ ಶೀರ್ಷಿಕೆ 4215-02-800-0-02-132, 4215-02-800-0-02-422 ಮತ್ತು 4215-02-800-0-02-423, (ಯೋಜನೆ)ಯಡಿ ಭರಿಸುವುದು.

ಈ ಆದೇಶವನ್ನು ಉಲ್ಲೇಖಿತ ಸರ್ಕಾರಿ ಆದೇಶದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ.ವಿ.ಮೇಘಣ್ಣವರ)
ನಿರ್ದೇಶಕರು(ಸ್ವಉಕಾ) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:
1. ಮಹಾಲೇಖಪಾಲಕರು(ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲಕರು(ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲಕರು(ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಇಲಾಖೆ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇಂಧನ ಇಲಾಖೆ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ, ಇಲಾಖೆ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯುವಜನ ಸೇವೆಗಳ ಇಲಾಖೆ, ಬೆಂಗಳೂರು.
18. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು.

19. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
20. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬೆಂಗಳೂರು.
21. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
22. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
23. ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
24. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ,(PMU)(IF) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
25. ವಿಶೇಷಾಧಿಕಾರಿಗಳು(ಜಿ.ಪಂ)ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ,ವಿಧಾನಸೌಧ, ಬೆಂಗಳೂರು.
26. ನಿರ್ದೇಶಕರು, (ಸ್ವಉಕಾ) ಹಾಗೂ ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
27. ನಿರ್ದೇಶಕರು(ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
28. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
29. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
30. ಮುಖ್ಯ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲ ಮಂಡಳಿ ಕಟ್ಟಡ, ಬೆಂಗಳೂರು-20.
31. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ಚಿನ್ನಸ್ವಾಮಿ ಕ್ರೀಡಾಂಗಣ ಆವರಣ, ಬೆಂಗಳೂರು-1.
32. ಗುಲ್ಬರ್ಗಾ ವಿಭಾಗದ ಗುಲ್ಬರ್ಗಾ, ಬಳ್ಳಾರಿ, ರಾಯಚೂರು, ಕೊಪ್ಪಳ ಮತ್ತು ಬೀದರ್ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ, ಈ ಆದೇಶವನ್ನು ನಿಮ್ಮ ಜಿಲ್ಲಾ ವ್ಯಾಪ್ತಿಯ ತಾಲ್ಲೂಕು ಪಂಚಾಯಿತಿ/ ಗ್ರಾಮ ಪಂಚಾಯಿತಿಗಳ ಗಮನಕ್ಕೆ ತರುವುದು.
33. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
34. ಗುಲ್ಬರ್ಗಾ, ಬಳ್ಳಾರಿ, ರಾಯಚೂರು, ಕೊಪ್ಪಳ ಮತ್ತು ಬೀದರ್ ಜಿಲ್ಲಾ ಖಜಾನಾಧಿಕಾರಿಗಳು.
35. ಅಧೀನ ಕಾರ್ಯದರ್ಶಿಗಳು(ವೆಚ್ಚ-6), ಜಿಲ್ಲಾ ಪಂಚಾಯತ್, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
36. ಮಾಹಿತಿ ಕೇಂದ್ರಕ್ಕೆ (10) ಪ್ರತಿಗಳು.
37. ರಕ್ಷಾ ಕಡತ/ಹೆಚ್ಚುವರಿ ಪ್ರತಿ